INSTAKAS

# 18 ನೇ ಜಪಾನ್-ಭಾರತ ವಿದೇಶಾಂಗ ಸಚಿವರ ಕಾರ್ಯತಂತ್ರದ ಸಂವಾದ



## ಇದೀಗ ಸುದ್ದಿಯಲ್ಲಿದೆ:



**18 ನೇ ಭಾರತ-ಜಪಾನ್ ಕಾರ್ಯತಂತ್ರದ ಸಂವಾದದಲ್ಲಿ, ಈ ಎರಡು ದೇಶಗಳು ತಮ್ಮ 'ವಿಶೇಷ ಕಾರ್ಯತಂತ್ರದ ಮತ್ತು ಜಾಗತಿಕ ಪಾಲುದಾರಿಕೆ'ಯ ಬೆಳವಣಿಗೆಯನ್ನು ಪುನರುಚ್ಚರಿಸಿದವು.**



## ಪ್ರಮುಖ ಮುಖ್ಯಾಂಶಗಳು:



### ಆರ್ಥಿಕ ಭದ್ರತೆಯ ಕುರಿತಾದ ಖಾಸಗಿ ವಲಯದ ಸಂವಾದ (B2B):-

2026 ರ ಆರಂಭದಲ್ಲಿ ಈ ಎರಡು ದೇಶಗಳು ಇದಕ್ಕೇ ಚಾಲನೆಯನ್ನು ಘೋಷಿಸಿದವು.

ಈ ಸಂವಾದವು 5 ಆದ್ಯತಾ ಕ್ಷೇತ್ರಗಳನ್ನು ಗುರುತಿಸಲು ಸಹಾಯ ಮಾಡುತ್ತದೆ. ಅವುಗಳೆಂದರೆ,

1. **ಅರೆವಾಹಕಗಳು (ಸೆಮಿಕಂಡಕ್ಟರ್‌ಗಳು),**
2. **ನಿರ್ಣಾಯಕ ಖನಿಜಗಳು,**
3. **ಮಾಹಿತಿ ಮತ್ತು ಸಂವಹನ ತಂತ್ರಜ್ಞಾನ (ICT),**
4. **ಶುದ್ಧ ಇಂಧನ**
5. **ಔಷಧ ಉದ್ಯಮ (ಫಾರ್ಮಾಸ್ಯುಟಿಕಲ್ಸ್)**



### ಜಪಾನ್-ಭಾರತ ಎಐ ಕಾರ್ಯತಂತ್ರದ ಸಂವಾದ:-

**'ಜಪಾನ್-ಭಾರತ ಎಐ ಸಹಕಾರ ಉಪಕ್ರಮ'ದ** (JAI) ಅಡಿಯಲ್ಲಿ ಈ ಸಂವಾದ'ವನ್ನು ಸ್ಥಾಪಿಸಲು ನಿರ್ಧರಿಸಲಾಗಿದೆ.



ಇದಕ್ಕಾಗಿ **ಜಪಾನ್ 2030 ರ ವೇಳೆಗೆ 500 ಅತ್ಯಂತ ಕೌಶಲ್ಯಯುತ ಭಾರತೀಯ ಎಐ ವೃತ್ತಿಪರರನ್ನು ಆಹ್ವಾನಿಸಲಿದೆ.**



## ಭಾರತ ಮತ್ತು ಜಪಾನ್ ಸಂಬಂಧಗಳು:



**ರಕ್ಷಣೆ ಮತ್ತು ಭದ್ರತೆ:-**
**ಸೇನಾ ಸಮರಾಭ್ಯಾಸಗಳು:- 'ಮಲಬಾರ್', 'ಧರ್ಮ ಗಾರ್ಡಿಯನ್' ಮತ್ತು 'ಜಿಮೆಕ್ಸ್'** ನಂತಹ ಸಮರಾಭ್ಯಾಸಗಳು ಉಭಯ ದೇಶಗಳ ನಡುವಿನ ಪರಸ್ಪರ ಕಾರ್ಯಸಾಧ್ಯತೆ ಮತ್ತು ಇಂಡೋ-ಪೆಸಿಫಿಕ್ ವಲಯದ ಭದ್ರತೆಯನ್ನು ಹೆಚ್ಚಿಸುತ್ತವೆ.



**ವ್ಯಾಪಾರ:-** 2023-24 ರ ಅವಧಿಯಲ್ಲಿ ದ್ವಿಪಕ್ಷೀಯ ವ್ಯಾಪಾರವು ಸುಮಾರು **$23 ಬಿಲಿಯನ್** ಮೌಲ್ಯವನ್ನು ತಲುಪಿದೆ.



**ಭಾರತದ 5ನೇ ಅತಿದೊಡ್ಡ ವಿದೇಶಿ ನೇರ ಹೂಡಿಕೆ (FDI) ಮೂಲ:-** ಜಪಾನ್, ಭಾರತದ 5ನೇ ಅತಿದೊಡ್ಡ ವಿದೇಶಿ ನೇರ ಹೂಡಿಕೆ (FDI) ಮೂಲವಾಗಿದೆ.



**ಬುಲೆಟ್ ರೈಲು:- ಮುಂಬೈ-ಅಹಮದಾಬಾದ** ನಡುವಿನ ಅತಿ ವೇಗದ ಬುಲೆಟ್ ರೈಲು ಯೋಜನೆಯು ಭಾರತ ಮತ್ತು ಜಪಾನ್ ನಡುವಿನ ಸಾರಿಗೆ ಸಹಕಾರಕ್ಕೆ ಒಂದು ಪ್ರಮುಖ ಉದಾಹರಣೆಯಾಗಿದೆ.



**ಶುದ್ಧ ಇಂಧನ ಪಾಲುದಾರಿಕೆ, 2022):- ಜಲಜನಕ, ನವೀಕರಿಸಬಹುದಾದ ಇಂಧನಗಳು ಮತ್ತು ಹವಾಮಾನ ಸಹಕಾರ** ಕ್ಷೇತ್ರಗಳನ್ನು ವಿಸ್ತರಿಸುತ್ತದೆ.



**ಕ್ವಾಡ್:-** 'ಕ್ವಾಡ್' ಸಮನ್ವಯವು **ಸಾಮೂಹಿಕ ಕಡಲ(ಸಾಗರ) ಬದ್ಧತೆಗಳ ಮೂಲಕ ಇಂಡೋ-ಪೆಸಿಫಿಕ್ ವಲಯದಲ್ಲಿ ಸ್ಥಿರತೆಯನ್ನು** ಖಾತ್ರಿಗೊಳಿಸುತ್ತದೆ.



**ಪೂರೈಕೆ ಸರಪಳಿ ಸ್ಥಿತಿಸ್ಥಾಪಕತ್ವ ಉಪಕ್ರಮ (SCRI):-** ಇದು **ನಿರ್ಣಾಯಕ ಸರಕುಗಳ ಪೂರೈಕೆಗಾಗಿ ಚೀನಾದ ಮೇಲಿನ ಅವಲಂಬನೆಯನ್ನು ಕಡಿಮೆ** ಮಾಡುತ್ತದೆ.



**ವೇದಿಕೆಗಳು:-** ಭಾರತ ಮತ್ತು **ಜಪಾನ್ ರಾಷ್ಟ್ರಗಳು ಜಿ-20, ಅಂತಾರಾಷ್ಟ್ರೀಯ ಸೌರ ಒಕ್ಕೂಟ, CDRI ಮತ್ತು IPEF** ಗಳಲ್ಲಿ ಸಹಕರಿಸುತ್ತಿದ್ದು, ಇದು ಬಹುಪಕ್ಷೀಯ ಆಡಳಿತವನ್ನು ಬಲಪಡಿಸುತ್ತದೆ.




**ಬಾಹ್ಯಾಕಾಶ:- ಇಸ್ರೋ ಮತ್ತು ಜಾಕ್ಸಾ (JAXA) ದ 'ಲುಪೆಕ್ಸ್' ಮಿಷನ್**, ಬಾಹ್ಯಾಕಾಶ ಪರಿಶೋಧನಾ ಕ್ಷೇತ್ರದಲ್ಲಿನ ಅತ್ಯಾಧುನಿಕ ಸಹಯೋಗಕ್ಕೆ ಒಂದು ಉತ್ತಮ ಉದಾಹರಣೆಯಾಗಿದೆ.